**ಕರ್ನಾಟಕ ಸರ್ಕಾರ**

**ಸಮಾಜ ಕಲ್ಯಾಣ ಇಲಾಖೆ**

ಆಯುಕ್ತರ ಕಛೇರಿ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ,

ಬೆಂಗಳೂರು-01

ಸಂಖ್ಯೆ:ಸಕಇ/ಪಪೂತಕೇ/ಎಸ್-4/ಸಿಆರ್-14/2020-21 ದಿನಾಂಕ: 03.02.2023

## ಪ್ರಕಟಣೆ

ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ/ಯುವತಿಯರಿಗೆ NABH ನಿಂದ ಮಾನ್ಯತೆ ಪಡೆದ HCGL ಹಾಸ್ಪಿಟಲ್ ಮೂಲಕ 75% ಉದ್ಯೋಗ ಖಾತರಿಯೊಂದಿಗೆ 10ನೇ ತರಗತಿ ಉತೀರ್ಣರಾದ ವಿದ್ಯಾರ್ಥಿಗಳಿಗೆ ನಾನ್ ಪ್ಯಾರಾಮೆಡಿಕಲ್ ಅಲ್ಪಾವಧಿ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಮೂರು ತಿಂಗಳ ವಸತಿ ಸಹಿತ ತರಬೇತಿ ನೀಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಅನ್-ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **13.02.2023** ಹೆಚ್ಚಿನ ವಿವರಗಳಿಗೆ ಇಲಾಖೆಯ ವೆಬ್ ಸೈಟ್ **www.sw.kar.nic.in** ನ್ನು ಸಂಪರ್ಕಿಸುವುದು.

ಆಯುಕ್ತರು,

ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

**ಕರ್ನಾಟಕ ಸರ್ಕಾರ**

**ಸಮಾಜ ಕಲ್ಯಾಣ ಇಲಾಖೆ**

ಸಂಖ್ಯೆ:ಸಕಇ/ಪಮೂತಕೇ/ಎಸ್-4/ಸಿಆರ್-14/2021-22

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 03.02.2023

**ಅಧಿಸೂಚನೆ**

ವಿಷಯ: ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪ.ಜಾತಿ ಮತ್ತು ಪ.ವರ್ಗದ ನಿರುದ್ಯೋಗಿ ಯುವಕ/ಯುವತಿಯರಿಗೆ NABH ನಿಂದ ಮಾನ್ಯತೆ ಪಡೆದ HCGL ಹಾಸ್ಪಿಟಲ್ ಮೂಲಕ 75% ಉದ್ಯೋಗ ಖಾತರಿಯೊಂದಿಗೆ ನಾನ್ ಪ್ಯಾರಾಮೆಡಿಕಲ್ ಅಲ್ಪಾವಧಿ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ವಸತಿ ಸಹಿತ ತರಬೇತಿ ನೀಡುವ ಸಂಬಂಧ 10ನೇ ತರಗತಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪ.ಜಾತಿ ಮತ್ತು ಪ.ವರ್ಗದ ನಿರುದ್ಯೋಗಿ ಯುವಕ/ಯುವತಿಯರಿಗೆ NABH ನಿಂದ ಮಾನ್ಯತೆ ಪಡೆದ HCGL ಹಾಸ್ಪಿಟಲ್ ಮೂಲಕ 75% ಉದ್ಯೋಗ ಖಾತರಿಯೊಂದಿಗೆ ನಾನ್ ಪ್ಯಾರಾಮೆಡಿಕಲ್ ಅಲ್ಪಾವಧಿ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ವಸತಿ ಸಹಿತ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ನಾನ್ ಪ್ಯಾರಾಮೆಡಿಕಲ್ ಅಲ್ಪಾವಧಿ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಅಭ್ಯರ್ಥಿಗಳನ್ನು ಪಿ.ಯು.ಸಿ. ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣರಾಗಿರಬೇಕೆಂಬ ಷರತ್ತು ಅಳವಡಿಸಿಕೊಳ್ಳಲಾಗಿತ್ತು. ಸರ್ಕಾರದ ತಿದುಪಡಿ ಆದೇಶ ಸಂಖ್ಯೆ: ಸಕಇ 238 ಪಕವಿ 2020, ಬೆಂಗಳೂರು, ದಿನಾಂಕ: 23.01.2023ರ ಪ್ರಕಾರ 10ನೇ ತರಗತಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ನಾನ್ ಪ್ಯಾರಾಮೆಡಿಕ್ ಜನರಲ್ ಡ್ಯೂಟಿ ತರಬೇತಿಗೆ ಆಯ್ಕೆ ಮಾಡಲಾಗುತ್ತದೆ.

ನಾನ್ ಪ್ಯಾರಾಮೆಡಿಕಲ್ ಅಲ್ಪಾವಧಿ ಸರ್ಟಿಫಿಕೇಟ್ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

| ಕ್ರ.ಸಂ | **ಕೋರ್ಸ್‌ಗಳ ವಿವರ ಹಾಗೂ ವಿದ್ಯಾರ್ಹತೆ** | | | |
|---|---|---|---|---|
| 1. | ತರಬೇತಿ ವಿಧ | ವಿದ್ಯಾರ್ಹತೆ | ತರಬೇತಿ ಅವಧಿ | ತರಬೇತಿಗಳು |
| | ಪ್ಯಾರಮೆಡಿಕಲ್ ಅಸಿಸ್ಟೆಂಟ್ (ನಾನ್ ಪ್ಯಾರಾಮೆಡಿಕ್) | 10ನೇ ತರಗತಿ ಉತ್ತೀರ್ಣರಾಗಿರಬೇಕು. | 3 ತಿಂಗಳು | General Duty Assistant (GDA) |
| 2. | ವಯಸ್ಸು | 18 ರಿಂದ 40 ವರ್ಷ | | |
| 3. | ಅಭ್ಯರ್ಥಿಯ ಸಾಮಾನ್ಯ ಅರ್ಹತೆ | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.<br>2. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>3. ಅಂಗವಿಕಲ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ವೈದ್ಯಕೀಯ ದೃಢೀಕರಣ | | |

| | | |
|---|---|---|
| | | ಪತ್ರವನ್ನು ಅರ್ಜಿ ಸಲ್ಲಿಸುವ ಮುಂಚಿತವಾಗಿ ಹೊಂದಿರುವುದು.<br>4. ವಿದ್ಯಾರ್ಥಿನಿಲಯ / ಕ್ರೈಸ್ ವಿದ್ಯಾರ್ಥಿನಿಲಯ / ಸಫಾಯಿ ಕರ್ಮಚಾರಿ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರ ಪಡೆದಿರಬೇಕು. |
| 4. | ವಾರ್ಷಿಕ ಆದಾಯ | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.5.00 ಲಕ್ಷ ಮೀರಿರಬಾರದು. |
| 5. | ಆಯ್ಕೆ ವಿಧಾನ | 1. ನಿಗದಿತ ಗುರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಬಂದಾಗ 10ನೇ ತರಗತಿ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತರಬೇತಿಗೆ ನಿಯೋಜಿಸಲಾಗುವುದು.<br>2. ನಿಗದಿತ ಗುರಿಗೆ ಅನುಗುಣವಾಗಿ ಅರ್ಜಿಗಳು ಬಾರದಿದ್ದಾಗ, ತರಬೇತಿ ನಡೆಯುತ್ತಿರುವ ಸಂದರ್ಭದಲ್ಲಿ ಬರುವ ಅರ್ಜಿಗಳನ್ನು ಮ್ಯಾನ್ಯುಯಲ್ ರೂಪದಲ್ಲಿ ನೇರವಾಗಿ ಸ್ವೀಕರಿಸಿ, ಅರ್ಹತಾ ಮಾನದಂಡವನ್ನು ಪೂರೈಸಿದವರನ್ನು ತರಬೇತಿಗೆ ನಿಯೋಜಿಸಲಾಗುವುದು. |
| 6. | ಅರ್ಜಿ ಸಲ್ಲಿಸುವ ವಿಧಾನ | ಅರ್ಜಿ ನಮೂನೆಯನ್ನು ಇಲಾಖೆಯ ವೆಬ್ ಸೈಟ್ ವಿಳಾಸ **www.sw.kar.nic.in** ನಲ್ಲಿ ಡೌನ್‌ಲೋಡ್ ಮಾಡಿಕೊಂಡು, ಈ ಕೆಳಕಂಡ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸುವುದು.<br>1. ಅಭ್ಯರ್ಥಿಯ ಜಾತಿ ಪ್ರಮಾಣ ಪತ್ರ,<br>2. ಆದಾಯ ಪ್ರಮಾಣ ಪತ್ರ,<br>3. ನಾನ್ ಪ್ಯಾರಾಮೆಡಿಕ್ ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಯಲ್ಲಿ ಉತೀರ್ಣರಾದ ಅಂಕ ಪಟ್ಟಿ<br>4. ಅರ್ಜಿ ನಮೂನೆಯಲ್ಲಿ ವಿವರವನ್ನು ಭರ್ತಿ ಮಾಡಿ, ಭಾವ ಚಿತ್ರವನ್ನು ಅಂಟಿಸಿ, ಸಲ್ಲಿಸುವುದು.<br>5. ಮೀಸಲಾತಿ ಪಡೆಯ ಬಯಸುವ ಅಭ್ಯರ್ಥಿಗಳು ಸೂಚಿಸಿರುವಂತೆ ಅರ್ಹತಾ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸುವುದು.<br>**ಅರ್ಜಿ ಸಲ್ಲಿಸುವಾಗ ಈ ಮೇಲಿನ ದಾಖಲೆಗಳನ್ನು ಸ್ಕ್ಯಾನ್ ಮಾಡಿ** ಇ-ಮೇಲ್ ವಿಳಾಸ petcparamedical@gmail.com **ಕ್ಕೆ ಸಲ್ಲಿಸುವುದು**. ತಾಂತ್ರಿಕವಾಗಿ ಸಮಸ್ಯೆಗಳು ಕಂಡು ಬಂದರೆ ದೂರವಾಣಿ ಸಂಖ್ಯೆ : 080 22207784 ಗೆ ಸಂಪರ್ಕಿಸುವುದು. |
| 7. | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **13.02.2023 ಸಂಜೆ 6.00 ಗಂಟೆಗೆ** |

**ಸ್ಥಾನ ಹಂಚಿಕೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ:-**

| ಕ್ರ.ಸಂ. | ಮೀಸಲಾತಿ | ಶೇಕಡಾವಾರು | ಅರ್ಹರು |
|---|---|---|---|
| 1 | ಅಂಗವಿಕಲ / ವಿಕಲಚೇತನ | 4% | Right of person with disabilities acts -2016 ರಂತೆ ಸಕ್ಷಮ ಪ್ರಾಧಿಕಾರದಿಂದ ದಿವ್ಯಾಂಗ ಪ್ರಮಾಣ ಪತ್ರ ಹೊಂದಿದವರು. |